**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಇ-ಆಡಳಿತ/ಶಿಕ್ಷಕ ಮಿತ್ರ/2020-21

ದಿನಾಂಕ:05-05-2022

**ಜ್ಞಾಪನ**

ವಿಷಯ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಸೇವಾ ಮಾಹಿತಿಯನ್ನು ಪರಿಶೀಲಿಸಿ ಶಿಕ್ಷಕ ಮಿತ್ರ ತಂತ್ರಾಂಶದಲ್ಲಿ (EEDS) ಇಂದೀಕರಿಸುವ ಬಗ್ಗೆ.

ಉಲ್ಲೇಖ:

1. ಈ ಕಛೇರಿ ಪತ್ರ ಸಂಖ್ಯೆ:ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ:12-04-2021, ದಿನಾಂಕ:07-06-2021, ದಿನಾಂಕ:25-06-2021, ದಿನಾಂಕ:03-09-2021
2. ನಿರ್ದೇಶಕರು, ಇತರೆ ಪರೀಕ್ಷೆಗಳು ಹಾಗೂ ವರ್ಗಾವಣಾ ಪ್ರಕ್ರಿಯೆ ನಿಯಂತ್ರಣಾಧಿಕಾರಿಗಳು ರವರ ಪತ್ರ ಸಂಖ್ಯೆ:ಇ-ಆಡಳಿತ ವರ್ಗಾವಣೆ/07/2020-21 ದಿನಾಂಕ:08-10-2021

****

ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯ ಶಿಕ್ಷಕರು, ಅಧಿಕಾರಿಗಳು ಹಾಗೂ ಬೋಧಕೇತರ ಸಿಬ್ಬಂಧಿಗಳ ಸೇವಾ ಮಾಹಿತಿಯನ್ನು ಶಿಕ್ಷಕ ಮಿತ್ರ ತಂತ್ರಾಂಶದಲ್ಲಿ (EEDS) ಸಂಪೂರ್ಣವಾಗಿ ಇಂಧೀಕರಿಸುವಂತೆ ಅವಕಾಶ ಕಲ್ಪಿಸಿ ಉಲ್ಲೇಖಿತ ಪತ್ರಗಳಲ್ಲಿ ಸೂಚಿಸಲಾಗಿರುತ್ತದೆ. ಆದಾಗ್ಯೂ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಮಾಹಿತಿಯನ್ನು ಪೂರ್ಣ ಪ್ರಮಾಣದಲ್ಲಿ ಇಂಧೀಕರಿಸಿಲ್ಲದಿರುವುದು ತಂತ್ರಾಂಶದ ವರದಿಗಳಲ್ಲಿ ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಅಂಶಗಳನ್ನು ನಿಗಧಿತ ಕಾಲಮಿತಿಯೊಳಗೆ ಪೂರ್ಣಗೊಳಿಸಲು ತಿಳಿಸಿದೆ.

1. 2021-22 ನೇ ಸಾಲಿನವರೆಗೆ ವರ್ಗಾವಣಾ ಪ್ರಕ್ರಿಯೆ ಮುಕ್ತಾಯಗೊಂಡಿರುವುದರಿಂದ, ವರ್ಗಾವಣೆಗೊಂಡ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಸೇವಾ ಮಾಹಿತಿಯನ್ನು ಇಇಡಿಎಸ್ ತಂತ್ರಾಂಶದಲ್ಲಿ ಇಂದೀಕರಿಸುವುದು.
2. ಶಿಕ್ಷಣ ಇಲಾಖೆಯ ಎಲ್ಲಾ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಸೇವಾ ವಿವರಗಳನ್ನು (ಬಡ್ತಿ, ನಿವೃತ್ತಿ, ಮರಣ, ಸ್ವಯಂ ನಿವೃತ್ತಿ ಹೊಂದಿರುವ) ಇಇಡಿಎಸ್ ತಂತ್ರಾಂಶದಲ್ಲಿ ಇಂದೀಕರಿಸುವುದು.
3. ಶಿಕ್ಷಣ ಇಲಾಖೆಯ ಎಲ್ಲಾ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಸೇವಾ ವಿವರಗಳಲ್ಲಿ ಹಲವಾರು ದೋಷಗಳಿದ್ದು(ನೇಮಕಾತಿ ವಿಧಾನ, ಖಾಯಂ ಪೂರ್ವ ಸೇವಾವಧಿ ಘೋಷಣೆ, ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹುದ್ದೆ, ವೃಂದ, ಮುಂತಾದವುಗಳು) ಅವುಗಳನ್ನು ಸರಿಪಡಿಸಿ ಹಾಗೂ ನೌಕರರ ಸಂಪೂರ್ಣ ಸೇವಾ ಮಾಹಿತಿಗಳ Database ಅನ್ನು ಅಂತಿಮಗೊಳಿಸುವುದು.

ಎಲ್ಲಾ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಅಪೂರ್ಣ ಮಾಹಿತಿಗಳನ್ನು ತಂತ್ರಾಂಶದಲ್ಲಿ ಇಂದಿಕರಿಸಲು ಪ್ರಸ್ತುತ **ದಿನಾಂಕ:16-05-2022** ವರೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. ತದನಂತರ ಜಿಲ್ಲಾವಾರು ಮಾಹಿತಿಯನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು(ಆಡಳಿತ)ರವರು ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಮಾಹಿತಿ ಸಂಪೂರ್ಣವಾಗಿ ಇಂದೀಕರಿಸಿರುವ ಬಗ್ಗೆ ದೃಢೀಕರಣ ಪತ್ರವನ್ನು **ದಿನಾಂಕ:18-05-2022** ರೊಳಗೆ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಎಲ್ಲಾ ಬಟವಾಡೆ ಅಧಿಕಾರಿಗಳು ತಮ್ಮ ಅಧೀನ ಸಿಬ್ಬಂಧಿ ವರ್ಗದವರ ಪೂರ್ಣ ಪ್ರಮಾಣದ ಸೇವಾ ಮಾಹಿತಿಯನ್ನು ಸೇವಾ ಪುಸ್ತಕದಲ್ಲಿನ ಮಾಹಿತಿಯಂತೆ EEDS ತಂತ್ರಾಂಶದಲ್ಲಿ ಕಡ್ಡಾಯವಾಗಿ ಇಂದೀಕರಿಸಲು ಅಂತಿಮ ಅವಕಾಶ ಕಲ್ಪಿಸಲಾಗಿದೆ. ನಿಗಧಿತ ಅವಧಿಯನ್ನು ಮೀರಿ ಸಲ್ಲಿಕೆಯಾಗುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. ಯಾವುದೇ ವ್ಯತ್ಯಾಸಗಳು ಕಂಡುಬಂದಲ್ಲಿ ಸಂಬಂಧಿಸಿದ ಬಟವಾಡೆ ಅಧಿಕಾರಿಗಳೇ ಹೊಣೆಗಾರರಾಗಿರುತ್ತಾರೆ. ತಂತ್ರಾಂಶಕ್ಕೆ ಸಂಬಂಧಿಸಿದಂತೆ ಯಾವುದೇ ತಾಂತ್ರಿಕ ಗೊಂದಲಗಳಿದ್ದಲ್ಲಿ ವಿವರಗಳನ್ನು karonlineserviceshelp@gmail.com ಗೆ ಇ-ಮೇಲ್ ಮುಖೇನ ಮನವಿ ಸಲ್ಲಿಸಲು ತಿಳಿಸಿದೆ.

(ಕರಡು ಪತ್ರ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಡಾ.ರೂಪಶ್ರೀ. ಎಸ್ **ಕೆ.ಎ.ಎಸ್**
ಜಂಟಿನಿರ್ದೇಶಕರು(ಆಡಳಿತ)

**ಪ್ರತಿಯನ್ನು**

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರಿಗೆ ಮಾಹಿತಿಗಾಗಿ
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಮಾಹಿತಿಗಾಗಿ

**ಇವರಿಗೆ,**

1. ರಾಜ್ಯದ ಎಲ್ಲಾ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ವಿಭಾಗೀಯ ಜಂಟಿ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ)ರವರ ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ)ರವರ ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತುರ್ತು ಅಗತ್ಯ ಕ್ರಮಕ್ಕಾಗಿ
6. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳ ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ(ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖೇನ)
7. ಕಛೇರಿ ಪ್ರತಿ.